ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ:02:ಇತರೆ:2012-13:ವ&ನಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:27.10.2016.

## ಸುತ್ತೋಲೆ

ವಿಷಯ: 2016-17ನೇ ಸಾಲಿನ ಬೋಧನಾ ಕಾರ್ಯಭಾರ ಹಾಗೂ ಸಿಬ್ಬಂದಿಗಳ ವಿವರಗಳನ್ನು EMIS ನಲ್ಲಿ ಅಪ್‌ಲೋಡ್ ಮಾಡುವ ಬಗ್ಗೆ.

*****

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, 2016-17ನೇ ಸಾಲಿನ ಬೋಧನಾ ಕಾರ್ಯಭಾರ ಹಾಗೂ ಸಿಬ್ಬಂದಿಗಳ ಸೇವಾ ವಿವರಗಳನ್ನು EMISನಲ್ಲಿ ಅಪ್‌ಲೋಡ್ ಮಾಡುವಂತೆ ಅನೇಕ ಬಾರಿ ಎಸ್.ಎಂ.ಎಸ್ ಮೂಲಕ ಸೂಚಿಸಲಾಗಿದ್ದರೂ ಸಹ ಹಲವಾರು ಕಾಲೇಜುಗಳಿಂದ ಮಾಹಿತಿಗಳನ್ನು ಅಪ್‌ಲೋಡ್ ಮಾಡದಿರುವುದು ಹಾಗೂ ಅಪೂರ್ಣ ಮಾಹಿತಿಗಳನ್ನು ಅಪ್‌ಲೋಡ್ ಮಾಡಿರುವುದು ಕಂಡುಬಂದಿರುತ್ತದೆ. ಆದ್ದರಿಂದ ತಮ್ಮ ಕಾಲೇಜಿನ ಲೀನ್ ಹೊಂದಿರುವ (ವೇತನ ಪಡೆಯುತ್ತಿರುವ) ಕಾಲೇಜಿನ ಎಲ್ಲಾ ಸಿಬ್ಬಂದಿಗಳ ವಿವರವನ್ನು ಹಾಗು ಕಾಲೇಜಿನಲ್ಲಿ ಬೋಧಿಸುತ್ತಿರುವ ಎಲ್ಲಾ ವಿಷಯಗಳ 2016-17ನೇ ಸಾಲಿನ ಕಾರ್ಯಭಾರ ವಿವರಗಳ ವಿಷಯವಾರು ಮಾಹಿತಿಯನ್ನು ನಿಖರವಾಗಿ ದಿ:03-11-2016ರ ಒಳಗೆ EMISನಲ್ಲಿ ಅಪ್‌ಲೋಡ್ ಮಾಡಲು ಹಾಗೂ ಈಗಾಗಲೇ ಮಾಡಲಾಗಿರುವ ಮಾಹಿತಿಗಳು ಸರಿಯಾಗಿರುವ ಬಗ್ಗೆ ಖಚಿತಪಡಿಸಿಕೊಳ್ಳಲು ಸೂಚಿಸಲಾಗಿದೆ.

ಈ ಹಿಂದೆ ಕೆಲವೊಂದು ವಿಷಯಗಳ ಕಾರ್ಯಭಾರ ವಿವರಗಳನ್ನು EMISನಲ್ಲಿ ಪ್ರತ್ಯೇಕವಾಗಿ ಅಪ್‌ಲೋಡ್ ಮಾಡಲು ಅವಕಾಶವಿಲ್ಲದ ಕಾರಣ ಮಾಹಿತಿಗಳು ಸ್ಪಷ್ಟವಾಗಿಲ್ಲದ ಅಂಶವನ್ನು ಗಮನಿಸಲಾಗಿದೆ. ಪ್ರಸ್ತುತ ಕೆಳಕಂಡ ವಿಷಯಗಳಿಗೆ ಪ್ರತ್ಯೇಕವಾಗಿ ಕಾರ್ಯಭಾರ ಅಪ್‌ಲೋಡ್ ಮಾಡಲು ಅವಕಾಶ ಕಲ್ಪಿಸಲಾಗಿರುವುದರಿಂದ ಕಡ್ಡಾಯವಾಗಿ ಕಾಲೇಜಿನಲ್ಲಿ ಬೋಧಿಸುತ್ತಿರುವ ಎಲ್ಲಾ ವಿಷಯಗಳ 2016-17ನೇ ಸಾಲಿನ ಕಾರ್ಯಭಾರ ವಿವರಗಳನ್ನು ವಿಷಯವಾರು ನಿಗದಿತ ದಿನಾಂಕದ ಒಳಗೆ ಅಪ್‌ಲೋಡ್ ಮಾಡಲು ಸೂಚಿಸಲಾಗಿದೆ.

| ಕ್ರ.ಸಂ. | ವಿಷಯ |
|---|---|
| 1 | Co-operation |
| 2 | Criminology |
| 3 | Forensic science |
| 4 | Master of International Business |
| 5 | Master of Financial Accounting |
| 6 | Commerce |
| 7 | Bachelor of Business Management/<br>Bachelor of Business Administration |
| 8 | Master of Business Administration |
| 9 | Tourism Administration |
| 10 | Bachelor of Fashion Technology |
| 11 | Applied Botany |
| 12 | Military Science |
| 13 | Environment Science |

ಈಗಾಗಲೇ upload ಮಾಡಲಾಗಿರುವ Staff Profile ನಲ್ಲಿ ಕೂಡಾ ಉಪನ್ಯಾಸಕರು ನೇಮಕಾತಿ ಹೊಂದಿರುವ ವಿಷಯದ ಬಗ್ಗೆ ಮತ್ತೊಮ್ಮೆ ನೇಮಕಾತಿ ಆದೇಶದೊಂದಿಗೆ ಪರಿಶೀಲಿಸಿ ಮಾಹಿತಿ ತಪ್ಪಾಗಿದ್ದಲ್ಲಿ ಸರಿಪಡಿಸಲು ಸೂಚಿಸಿದೆ.

ಅಪ್‌ಲೋಡ್ ಮಾಡಿರುವ ಮಾಹಿತಿಗಳಲ್ಲಿ ಯಾವುದೇ ರೀತಿಯ ತಪ್ಪುಗಳು ಕಂಡು ಬಂದಲ್ಲಿ ಸಂಬಂಧಿಸಿದ ಪ್ರಾಂಶುಪಾಲರನ್ನು ನೇರ ಜವಾಬ್ದಾರರನ್ನಾಗಿ ಪರಿಗಣಿಸಿ ಶಿಸ್ತುಕ್ರಮ ಕೈಗೊಳ್ಳಲಾಗುವುದೆಂದು ಸೂಚಿಸಿದೆ.

ಕಾಲೇಜು ಶಿಕ್ಷಣ ಮುಖ್ಯಆಡಳಿತಾಧಿಕಾರಿಗಳು

<u>ಇವರಿಗೆ:</u>

1. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು/ಪ್ರಭಾರಿ ಪ್ರಾಂಶುಪಾಲರುಗಳಿಗೆ- ಮಾಹಿತಿ ಹಾಗೂ ತುರ್ತು ಕ್ರಮಕ್ಕಾಗಿ.
2. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು- ಅಗತ್ಯ ಕ್ರಮಕ್ಕಾಗಿ.
3. ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
4. ಕಛೇರಿ ಪ್ರತಿ.